## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಂಗಳ ಚಾರಿಟಬಲ್ ಟ್ರಸ್ಟ್, ಮಂಗಳೂರು ಈ ಸಂಸ್ಥೆಯ ಮಂಗಳ ಕಾಲೇಜ್ ಆಫ್ ಸ್ಪೀಚ್ & ಹಿಯರಿಂಗ್, ನೀರ್ ಮಾರ್ಗ, ಮಂಗಳೂರು ಈ ಕಾಲೇಜಿನಲ್ಲಿ Bachelor in Audiology and Speech Language Pathology ಈ ಕೋರ್ಸನ್ನು 20 ಸೀಟುಗಳ ಪ್ರವೇಶಮಿತಿಯೊಂದಿಗೆ 2020-21ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಸಂಯೋಜನೆ ನೀಡುವ ಬಗ್ಗೆ.

-----

**ಓದಲಾಗಿದೆ:**

ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪತ್ರ ಸಂಖ್ಯೆ: RGU/AFF/AHS/Fr/MH/2020-21 ದಿನಾಂಕ: 08/12/2020.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಮಂಗಳ ಚಾರಿಟಬಲ್ ಟ್ರಸ್ಟ್, ಮಂಗಳೂರು ಈ ಸಂಸ್ಥೆಯ ವತಿಯಿಂದ ಮಂಗಳ ಕಾಲೇಜ್ ಆಫ್ ಸ್ಪೀಚ್ & ಹಿಯರಿಂಗ್, ನೀರ್ ಮಾರ್ಗ, ಮಂಗಳೂರು ಈ ಕಾಲೇಜಿನಲ್ಲಿ Bachelor in Audiology and Speech Language Pathology ಈ ಕೋರ್ಸನ್ನು 20 ಸೀಟುಗಳ ಪ್ರವೇಶಮಿತಿಯೊಂದಿಗೆ 2020-21ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994 ರ ಕಲಂ 45(2) ರಡಿ ಸಂಸ್ಥೆಯು ಸಲ್ಲಿಸಿದ್ದ ಅರ್ಜಿಯನ್ನು, ಸ್ಥಳೀಯ ತಪಾಸಣಾ ಸಮಿತಿಯ ವರದಿಯನ್ನು, ಅಕಾಡೆಮಿಕ್ ಕೌನ್ಸಿಲ್ ಮತ್ತು ಸಿಂಡಿಕೇಟ್ ನಿರ್ಣಯವನ್ನು ಸಲ್ಲಿಸುತ್ತಾ, ಈ ಸಂಸ್ಥೆಯಲ್ಲಿ ಮೇಲ್ಕಂಡ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಅನುಮತಿ ನೀಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 65 ಎಂಎಸ್‌ಎಫ್ 2021, ಬೆಂಗಳೂರು, ದಿನಾಂಕ:15-02-2021**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994 ರ ಕಲಂ 45(5) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಮಂಗಳ ಚಾರಿಟಬಲ್ ಟ್ರಸ್ಟ್, ಮಂಗಳೂರು ಈ ಸಂಸ್ಥೆಯ ವತಿಯಿಂದ ಮಂಗಳ ಕಾಲೇಜ್ ಆಫ್ ಸ್ಪೀಚ್ & ಹಿಯರಿಂಗ್, ನೀರ್ ಮಾರ್ಗ, ಮಂಗಳೂರು ಈ ಕಾಲೇಜಿನಲ್ಲಿ Bachelor in Audiology and Speech Language Pathology ಈ ಕೋರ್ಸನ್ನು 20 ಸೀಟುಗಳ ಪ್ರವೇಶಮಿತಿಯೊಂದಿಗೆ 2020-21ನೇ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲು ಕೆಳಕಂಡ ಷರತ್ತುಗಳಿಗೊಳಪಟ್ಟು ಸಂಯೋಜನೆಯನ್ನು ನೀಡಲಾಗಿದೆ.

**ಷರತ್ತು ಮತ್ತು ನಿಬಂಧನೆಗಳು**

1. ಈ ಸಂಸ್ಥೆಯು ಮೇಲ್ಕಂಡ ಕೋರ್ಸಿನ ಶೇ.20 ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.
2. ಮೇಲ್ಕಂಡ ಕೋರ್ಸುಗಳ ಸಂಯೋಜನೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಂಜೂರಾತಿಯನ್ನು ಪಡೆಯತಕ್ಕದ್ದು.

3. ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಹಾಗೂ ವಿಶ್ವವಿದ್ಯಾಲಯವು ನಿಗದಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಕಡ್ಡಾಯವಾಗಿ ಹೊಂದತಕ್ಕದ್ದು.
4. ಸದರಿ ಸಂಸ್ಥೆಯು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮೋದನೆ ಪಡೆದ ನಂತರವೇ, ನಿಗದಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು. ಯಾವುದೇ ಕಾರಣಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದಲ್ಲಿ 1991 ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ, ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.
5. ರಾಜ್ಯ ಸರ್ಕಾರ ಮತ್ತು ವಿಶ್ವವಿದ್ಯಾಲಯವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
6. ಸದರಿ ಸಂಸ್ಥೆಯು ಸ್ವಂತ ಆಸ್ಪತ್ರೆಯನ್ನು ಸರ್ಕಾರ ನಿಗಧಿಪಡಿಸಿದ ಕಾಲಮಿತಿಯಲ್ಲಿ ಹೊಂದತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.
7. ವಿದ್ಯಾರ್ಥಿಗಳ ಪ್ರವೇಶವನ್ನು 2003 ರ ಕರ್ನಾಟಕ ನರ್ಸಿಂಗ್, ಫಾರ್ಮಸಿ ಮತ್ತು ಫಿಜಿಯೋಥೆರಪಿ ಕೋರ್ಸುಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲಕಾಲಕ್ಕೆ ಮೇಲ್ಕಂಡ ಕೋರ್ಸಿನ ಪ್ರವೇಶಕ್ಕೆ ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಟ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.
8. ಮೇಲ್ಕಂಡ ಸಂಸ್ಥೆಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.
9. ಸದರಿ ಸಂಸ್ಥೆಯು ಮೇಲ್ಕಂಡ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ, 1994 ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 48 ನೇ ಪ್ರಕರಣದಲ್ಲಿ ಪ್ರಸ್ತುತ ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B.S. Prashant Kumar
15/02/2021

(ಬಿ. ಎಸ್. ಪ್ರಶಾಂತ್ ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ-3,
ವೈದ್ಯಕೀಯ ಶಿಕ್ಷಣ ಇಲಾಖೆ.

<u>ಇವರಿಗೆ:</u>

1. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ, 4ನೇ 'ಟಿ'ಬ್ಲಾಕ್, ಬೆಂಗಳೂರು – 560041.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
3. ಪ್ರಾಂಶುಪಾಲರು, ಮಂಗಳ ಕಾಲೇಜ್ ಆಫ್ ಸ್ಪೀಚ್ & ಹಿಯರಿಂಗ್, ನೀರ್ ಮಾರ್ಗ, ಮಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿ:</u>

1. ಮಾನ್ಯ ಆರೋಗ್ಯ & ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.